# ಕರ್ನಾಟಕ ವಿಧಾನ ಪರಿಷತ್

| | | |
|---|---|---|
| ಮಾನ್ಯ ಸದಸ್ಯರ ಹೆಸರು | : | ಶ್ರೀ ಬಸವರಾಜ ಪಾಟೀಲ್ ಇಟಗಿ. |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | : | 294 |
| ಉತ್ತರಿಸಬೇಕಾದ ಸಚಿವರು | : | ಮಾನ್ಯ ಕೃಷಿ ಸಚಿವರು |
| ಉತ್ತರಿಸಬೇಕಾದ ದಿನಾಂಕ | : | 03-02-2021 |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಬೆಂಗಳೂರು ಕೃಷಿ ವಿಶ್ವವಿದ್ಯಾಲಯದಲ್ಲಿ ಸಹಾಯಕ ಪ್ರಾಧ್ಯಾಪಕರ ನೇರ ನೇಮಕಾತಿಯಲ್ಲಿ ಸರ್ಕಾರದ ಆದೇಶಗಳನ್ನು ಉಲ್ಲಂಘಿಸಿ ನೇಮಕಾತಿ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬೆಂಗಳೂರು ಕೃಷಿ ವಿಶ್ವವಿದ್ಯಾಲಯದಲ್ಲಿ ಸಹಾಯಕ ಪ್ರಾಧ್ಯಾಪಕರ ನೇರ ನೇಮಕಾತಿಯಲ್ಲಿ ಅವ್ಯವಹಾರ ನಡೆದಿದೆ ಎಂದು ಸ್ವೀಕೃತವಾದ ದೂರುಗಳ ಪರಿಶೀಲನೆಗಾಗಿ ಸರ್ಕಾರವು ಶ್ರೀ ಮುನೀಶ್ ಮೌದ್ಗಿಲ್, ,ಭಾ.ಆ.ಸೇ ಇವರ ಅಧ್ಯಕ್ಷತೆಯಲ್ಲಿ ತನಿಖಾ ಸಮಿತಿಯನ್ನು ರಚಿಸಿ ದಿನಾಂಕ:03.03.2018ರಂದು ಆದೇಶ ಹೊರಡಿಸಿತ್ತು. ಆದರೆ, ಸದರಿ ಸಮಿತಿಯ ಕಾರ್ಯಾಚರಣೆ ಮುಂದುವರೆಯದಂತೆ ಕೆಲ ಆಯ್ಕೆಯಾದ ಅಭ್ಯರ್ಥಿಗಳು ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಂಖ್ಯೆ:23721/2018ನ್ನು, ದಿನಾಂಕ:05-06-2018ರಂದು ದಾಖಲಿಸಿರುತ್ತಾರೆ. ಸದರಿ ಪ್ರಕರಣವು ನ್ಯಾಯಾಲಯದಲ್ಲಿ ವಿಚಾರಣೆ ಹಂತದಲ್ಲಿರುತ್ತದೆ. |
| ಆ | ಸರ್ಕಾರವು ಶ್ರೀ. ಮುನೇಶ್ ಮುದಗಲ್ ಅವರ ಅಧ್ಯಕ್ಷತೆಯಲ್ಲಿ ದಿನಾಂಕ:03.03.2018ರಂದು ಒಂದು ಸಮಿತಿ ಮಾಡಿದ್ದು, ಅದು ಯಾವ ಹಂತದಲ್ಲಿದೆ; | |
| ಇ | ನೇಮಕಾತಿಯಲ್ಲಿ ಅಕ್ರಮವೆಸಗಿರುವ ಅಧಿಕಾರಿಗಳ ಮೇಲೆ ಮತ್ತು ನೇಮಕಾತಿ ಪಡೆದವರ ಮೇಲೆ ಸರ್ಕಾರ ಕೈಗೊಂಡ ಕ್ರಮವೇನು? | ಉದ್ಭವಿಸುವುದಿಲ್ಲ. |

ಸಂಖ್ಯೆ: AGRI-AUB/3/2021

(ಬಿ.ಸಿ. ಪಾಟೀಲ್)
ಕೃಷಿ ಸಚಿವರು